Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 31-07-2022

**ಪತ್ರಿಕಾ ಪ್ರಕಟಣೆ:**

# ಪೊಲೀಸ್ ಅಧೀಕ್ಷಕರಾದ ಡಾ.ಸುಮನ್ ಡಿ ಪೆನ್ನೇಕರ್ ವಿ.ಡಿ.ಐ.ಟಿ. ಗೆ ಭೇಟಿ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದ ವಾರ್ಷಿಕೋತ್ಸವ ಸಮಾರಂಭವು ಜುಲೈ 31ರಂದು ವಿಜೃಂಭಣೆಯಿಂದ ಜರುಗಿತು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಅಧೀಕ್ಷಕರಾದ ಡಾ. ಸುಮನ್ ಡಿ ಪೆನ್ನೇಕರ್ ಅವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ " ಸಮಾಜದಲ್ಲಿ ತಮ್ಮ ಹೊಣೆಯನ್ನರಿತು ಜವಾಬ್ದಾರಿಯುತ ನಾಗರೀಕರಾಗಬೇಕೆಂದು ಕರೆ ನೀಡಿದರು. ಒಳ್ಳೆಯ ವ್ಯಕ್ತಿತ್ವ ಹಾಗೂ ಹವ್ಯಾಸದಿಂದ ಉತ್ತಮ ಸಮಾಜದ ನಿರ್ಮಾಣ ಸಾಧ್ಯ ಎಂದು ನುಡಿದರು. ರಸ್ತೆ ಸಂಚಾರಿ ನಿಯಮವನ್ನು ತಪ್ಪದೇ ಪಾಲಿಸಿ ಅಪಘಾತಗಳಾಗುವ ಸಂಭವವನ್ನು ತಗ್ಗಿಸುವಂತೆ ನುಡಿದರು. ಇದೇ ಸಂದರ್ಭದಲ್ಲಿ ಡಾ. ಸುಮನ್ ಅವರು ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡೆಯಲ್ಲಿ ಉತ್ತಮ ಸಾಧನೆಗೈದ ಮಹಾವಿದ್ಯಾಲಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕರಿಸಿದರು. ಪ್ರಾಂಶುಪಾಲರಾದ ಡಾ.ವಿ.ಎ.ಕುಲಕರ್ಣಿ ಅವರು ಸಭಿಕರನ್ನು ಸ್ವಾಗತಿಸುತ್ತಾ, ಡಾ.ಸುಮನ್ ಡಿ ಪೆನ್ನೇಕರ್ ಅವರು ನಮ್ಮ ಆಮಂತ್ರಣವನ್ನು ಸ್ವೀಕರಿಸಿ ಈ ಕಾರ್ಯಕ್ರಮಕ್ಕೆ ಆಗಮಿಸಿರುವುದು ಅತಿ ಹರ್ಷ ತಂದಿದೆ ಎಂದು ನುಡಿದರು. ವರ್ಷದ ಅತ್ಯುತ್ತಮ ವಿದ್ಯಾರ್ಥಿಯಾಗಿ ಹೊರಹೊಮ್ಮಿದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ಕೊನೆಯ ವರ್ಷದ ವಿದ್ಯಾರ್ಥಿನಿಯಾದ ಕುಮಾರಿ. ದಿವ್ಯಾ ಪೋಡ್ವಾಳ್ಕರ್ ನ್ನು ಇದೇ ಸಂದರ್ಭದಲ್ಲಿ ಪುರಸ್ಕರಿಸಲಾಯಿತು.

ದಾಂಡೇಲಿ ಉಪ ವಲಯದ ಪೊಲೀಸ್ ಅಧೀಕ್ಷಕರಾದ ಶ್ರೀ.ಕೆ.ಎಲ್.ಗಣೇಶ್, ದಾಂಡೇಲಿಯ ವೃತ್ತ ಪೊಲೀಸ್ ನಿರೀಕ್ಷಕರಾದ ಬಿ.ಎಸ್.ಲೋಕಾಪುರ್, ಜೋಯಿಡಾದ ವೃತ್ತ ಪೊಲೀಸ್ ನಿರೀಕ್ಷಕರಾದ ಶ್ರೀ.ದಯಾನಂದ್ ಎಸ್, ಹಳಿಯಾಳದ ಪಿ.ಎಸ್.ಐ. ವಿನೋದ್ ಎಸ್. ಕೆ, ಹಳಿಯಾಳದ ಅಪರಾಧ ವಿಭಾಗದ ಪಿ.ಎಸ್.ಐ. ಶ್ರೀಮತಿ. ಉಮಾ ಬಸರಗೌಡರ್, ದಾಂಡೇಲಿ ಗ್ರಾಮಾಂತರ ವಿಭಾಗದ ಪಿ.ಎಸ್.ಐ. ಶ್ರೀ. ಶಿವಾನಂದ ನವಲ್ಕಗಿ ಇವರುಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಡೀನ್ ಎಫ್.ಐ.ಐ.ಐ. ಆದ ಎಸ್.ಡಿ. ಕುಲಕರ್ಣಿ ಡಾ. ಸುಮನ್ ಅವರ ಕಿರು ಪರಿಚಯ ಮಾಡಿದರು. ಶೈಕ್ಷಣಿಕ ವಿಭಾಗದ ಡೀನ್ ಆದ ಡಾ.ಆರ್.ಎಸ್.ಮುನ್ನೊಳ್ಳಿ ವಂದಿಸಿದರು. ಆಡಳಿತ ವಿಭಾಗದ ಡೀನ್ ಆದ ಪ್ರೊ.ಮಂಜುನಾಥ ಡಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಅವರುಗಳು ಇದೇ ಸಂದರ್ಭದಲ್ಲಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಪ್ರೊ. ರಾಜೇಶ್ವರಿ ಎನ್ ರೂಪಿಸಿದರು. ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಹಾಡು, ನೃತ್ಯವನ್ನು ಪ್ರದರ್ಶಿಸಿ ಮನರಂಜಿಸಿದರು. ಸ್ವಾತಂತ್ರ್ಯದ ಅಮೃತಮಹೋತ್ಸವ ವರ್ಷದ ಪ್ರಯುಕ್ತ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕ ಹಾಗೂ ಹಳಿಯಾಳ ಪೊಲೀಸ್ ವಿಭಾಗದ ವತಿಯಿಂದ ರಸ್ತೆ ಸಂಚಾರಿ ನಿಯಮದ ಪ್ರತಿಜ್ಞಾ ವಿಧಿಯನ್ನು ಇದೇ ಸಂದರ್ಭದಲ್ಲಿ ಬೋಧಿಸಲಾಯಿತು. ಎಲ್ಲಾ ಸಿಬ್ಬಂದಿ ವರ್ಗ ಹಾಗೂ 1000ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗಿಯಾದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


KLS VDIT
Transforming Through Technology
UMANG 2K22
ANNUAL SOCIAL GATHERING
Chief Guest